**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರರು ಮತ್ತು ಅರಣ್ಯ ರಕ್ಷಕರು Elephant Task Forceಗೆ ಸ್ಥಳನಿಯುಕ್ತಿಗೊಳಿಸುವ ನಿಕಟಪೂರ್ವ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಿದ ಸೇವಾವಧಿಯನ್ನು 2023-24ನೇ ಸಾಲಿನಲ್ಲಿ ನಡೆಯುವ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಪರಿಗಣಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ: 21-11-2022.
2) ಅರಣ್ಯ ಸಂರಕ್ಷಣಾಧಿಕಾರಿ, ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು ರವರ ಅಧಿಕೃತ ಜ್ಞಾಪನ ಪತ್ರಗಳು ಸಂಖ್ಯೆ:ಎ4/ಇಎಸ್‌ಟಿ/ಇಟಿಎಫ್ /ವಿವ-33/2022-23, ದಿನಾಂಕ: 28-11-2022.
3) ಅರಣ್ಯ ಸಂರಕ್ಷಣಾಧಿಕಾರಿ, ಕೊಡಗು ವೃತ್ತ, ಮಡಿಕೇರಿ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಸಿಬ್ಬಂದಿ/Elephant Task Force/ವಿವ-28/2022-23, ದಿನಾಂಕ: 02-12-2022.
4) ಅರಣ್ಯ ಸಂರಕ್ಷಣಾಧಿಕಾರಿ, ಮೈಸೂರು ವೃತ್ತ, ಮೈಸೂರು ರವರ ಅಧಿಕೃತ ಜ್ಞಾಪನ ಪತ್ರಗಳು ಸಂಖ್ಯೆ: ಎ2/ಸಿಬ್ಬಂದಿ/ಇಟಿಎಫ಼/ಸಿಆರ್-21/2022-23, ದಿನಾಂಕ: 28-11-2022 ಮತ್ತು 01-12-2022.
5) ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗ, ಹಾಸನ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:ಎ1/ಸಿಬ್ಬಂದಿ/ಎ.ಟಾ.ಫೋ/ವಿವ-69/2022-23, ದಿನಾಂಕ: 05-12-2022.

***********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಸರ್ಕಾರದ ಆದೇಶದಲ್ಲಿ, ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿರುವ ಭಾಗಗಳಿಗೆ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಸದರಿ ಭಾಗದ ಪ್ರತಿ ಜಿಲ್ಲೆಗೊಂದರಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿ ನೇತೃತ್ವದಲ್ಲಿ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡ ಜಿಲ್ಲಾ Elephant Task Forceನ್ನು ರಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಿಂದ (5)ರ ಅಧಿಕೃತ ಜ್ಞಾಪನ ಪತ್ರಗಳಲ್ಲಿ, ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ವೃತ್ತಗಳಲ್ಲಿ ಕಾಡಾನೆ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ, ಹೊಸದಾಗಿ ರಚಿಸಿದ ಜಿಲ್ಲಾ Elephant Task Forceಗಳಿಗೆ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರರು ಹಾಗೂ ಅರಣ್ಯ ರಕ್ಷಕರ ಹುದ್ದೆಗಳನ್ನು ಸ್ಥಳಾಂತರಿಸಿ ಹಾಗೆ ಸ್ಥಳಾಂತರಿಸಿದ ಹುದ್ದೆಗಳಿಗೆ ಸಿಬ್ಬಂದಿಯನ್ನು ಸ್ಥಳ ನಿಯುಕ್ತಿಗೊಳಿಸಿ, ಆದೇಶಿಸಿದೆ.



Scanned with CamScanner

ಪ್ರಸ್ತುತ ಕಾಡಾನೆ ಹಾವಳಿ ಹೆಚ್ಚಾಗಿರುವ ಜಿಲ್ಲೆಗಳಲ್ಲಿ ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಾಗಿದ್ದು, ಆನೆಗಳಿಂದ ಅತಿ ಹೆಚ್ಚು ನಷ್ಟ ಹಾಗೂ ಜೀವಹಾನಿ ಆಗುತ್ತಿರುವುದರಿಂದ ತುರ್ತು ಕ್ರಮವಹಿಸುವ ಅವಶ್ಯಕತೆ ಇದ್ದುದರಿಂದ ಪ್ರಕರಣದ ಗಂಭೀರತೆಯ ಕಾರಣ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಮತ್ತು ಅರಣ್ಯ ರಕ್ಷಕ ವೃಂದದ ಸಿಬ್ಬಂದಿಗಳನ್ನು Elephant Task Forceಗೆ ಸ್ಥಳನಿಯುಕ್ತಿ ಮಾಡಿ ಆದೇಶಗಳನ್ನು ಹೊರಡಿಸಲಾಗಿದೆ.

ಈ ರೀತಿ ಸ್ಥಳನಿಯುಕ್ತಿಗೊಳಿಸಲಾದ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಮತ್ತು ಅರಣ್ಯ ರಕ್ಷಕರ ಈ ಹಿಂದೆ Elephant Task Forceಗೆ ಸ್ಥಳನಿಯುಕ್ತಿಗೊಳ್ಳುವ ನಿಕಟಪೂರ್ವ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಿದ ಸೇವಾವಧಿ (Tenure)ನ್ನು ಸೇರಿಸಿ, Karnataka State Civil Services (Regulation of Transfers and Postings of Forest Officers and other Officials) Rules, 2019ರ ಪ್ರಕಾರ 2023-24ನೇ ಸಾಲಿನಲ್ಲಿ ನಡೆಯುವ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಪರಿಗಣಿಸುವ ಕುರಿತಂತೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಎಫ್‌ಇಇ 366 ಎಫ್‌ಎನ್‌ಜಿ 2022 (ಇ),</u>

<u>ಬೆಂಗಳೂರು, ದಿನಾಂಕ: 15-12-2022.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ Elephant Task Forceಗೆ ಸ್ಥಳನಿಯುಕ್ತಿಗೊಳಿಸಿದ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಮತ್ತು ಅರಣ್ಯ ರಕ್ಷಕರು ಈ ಹಿಂದೆ Elephant Task Forceಗೆ ಸ್ಥಳನಿಯುಕ್ತಿಗೊಳ್ಳುವ ನಿಕಟಪೂರ್ವ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಿದ ಸೇವಾವಧಿ (Tenure)ನ್ನು, ಸೇರಿಸಿ, Karnataka State Civil Services (Regulation of Transfers and Postings of Forest Officers and other Officials) Rules, 2019ರ ಪ್ರಕಾರ ವಿಶೇಷ ಪ್ರಕರಣವಾಗಿ 2023-24ನೇ ಸಾಲಿನಲ್ಲಿ ನಡೆಯುವ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಪರಿಗಣಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಗೀತಾ ಎಂ. ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ (ಸೇವೆಗಳು)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು,(ಲೆಕ್ಕಪತ್ರ / ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು/ವನ್ಯಜೀವಿ/ಅಭಿವೃದ್ಧಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ನೇಮಕಾತಿ/ಆಡಳಿತ ಮತ್ತು ಸಮನ್ವಯ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.



Scanned with CamScanner

4. ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಅರಣ್ಯ ಸಂರಕ್ಷಣಾಧಿಕಾರಿಗಳು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಇವರ ಮೂಲಕ.
5. ಜಿಲ್ಲಾ ಪೊಲೀಸ್ ಅಧೀಕ್ಷಕರು ಟಾಸ್ಕ್ ಫೋರ್ಸ್‌ನ ಸಂಬಂಧಪಟ್ಟ ಜಿಲ್ಲೆ.
6. ಸಂಬಂಧಿಸಿದ ಅಧಿಕಾರಿ/ಸಿಬ್ಬಂದಿಗಳಿಗೆ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಇವರ ಮೂಲಕ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ (ಅರಣ್ಯ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ (ಸೇವೆಗಳು ಮತ್ತು ಸಮನ್ವಯ) ರವರ ಆಪ್ತ ಸಹಾಯಕರು

Scanned with CamScanner